ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಟೊಯೋಟಾ ಕಿರ್ಲೋಸ್ಕರ ಕಂಪನಿಯ ಕಾರ್ಮಿಕರನ್ನು ತೆಗೆದು ಹಾಕಿರುವ ಕುರಿತು

ಶ್ರೀ ಯು.ಬಿ ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) -

77(627) ಕಾರ್ಮಿಕ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರಿನ ಬಿಡದಿ ಸಮೀಪವಿರುವ ಟೊಯೋಟಾ ಕಿರ್ಲೋಸ್ಕರ್ ಮೊಟಾರ್‌ನ ಆಂತರಿಕ ಕಲಹಗಳಿಗೆ ಕಾರಣಗಳೇನು;

(ಆ) ಆಂತರಿಕ ಕಲಹಗಳಿಂದ ಕಾರ್ಮಿಕರು ಬೀದಿ ಪಾಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

(ಇ) ನೌಕರರು ತಮ್ಮ ಬೇಡಿಕೆಗಳಿಗೆ ಒತ್ತಾಯಿಸಿ ಅನಿರ್ದಿಷ್ಟಾವಧಿವರೆಗೆ ಮುಷ್ಕರ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದರ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು?